# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ವೈ.ಡಿ.ಕುನ್ನಿಬಾವಿ, ಹಿಂದಿನ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಗದಗ, ಇವರ ವಿರುದ್ಧ ಇಲಾಖಾ ವಿಚಾರಣೆ ಕುರಿತು.

ಓದಲಾಗಿದೆ:- 1. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 162 ಪಬವ 2010 ದಿ:26.10.2013

2. ಶ್ರೀ ವೈ.ಡಿ.ಕುನ್ನಿಬಾವಿ, ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಧಾರವಾಡ ಇವರ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ:07.02.2014

3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗ ರವರ ಪತ್ರ ಸಂಖ್ಯೆ:ಗಜಿಪಂ/ಆಡಳಿತ/ಸಿ.1.ವಹಿ/2013-14, ದಿನಾಂಕ:25.03.2014

****

**ಪ್ರಸ್ತಾವನೆ:**

ಶ್ರೀ ವೈ.ಡಿ.ಕುನ್ನಿಬಾವಿ, ಹಿಂದಿನ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಗದಗ (ಪ್ರಸ್ತುತ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಧಾರವಾಡ) ಇವರು ಸದರಿ ಹುದ್ದೆಯಲ್ಲಿ ಕರ್ತವ್ಯನಿರ್ವಹಿಸುತ್ತಿದ್ದ ಸಂಧರ್ಭದಲ್ಲಿ ಅವರನ್ನು ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ಹುದ್ದೆಗೆ ವರ್ಗಾಯಿಸಲಾಗಿದ್ದು, ಸದರಿ ಹುದ್ದೆಯಲ್ಲಿ ಕಾರ್ಯವರದಿಮಾಡಿಕೊಳ್ಳದೇ ಇರುವುದು, ಸಕ್ಷಮ ಪ್ರಾಧಿಕಾರಿಯ ಅನುಮತಿಯನ್ನು ಪಡೆಯದೇ ದಿನಾಂಕ:01.06.2010 ರಿಂದ 15.06.2010ರವರೆಗೆ ರಜೆ ಮೇಲೆ ತೆರಳಿರುವುದು, ಕಚೇರಿಯ ಉಪಯೋಗಕ್ಕಾಗಿ ಸರ್ಕಾರದ ವತಿಯಿಂದ ನೀಡಲಾಗಿದ್ದ ಮೊಬೈಲ್ ಸಿಮ್ ಕಾರ್ಡ್‌ನ್ನು ಹಿಂದಿರುಗಿಸಿ ಅವರ ಬಳಿ ಇಟ್ಟುಕೊಂಡಿರುವುದು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ, ಗದಗ ಹುದ್ದೆಯ ಅಧಿಕ ಪ್ರಭಾರದಲ್ಲಿದ್ದ ಅವಧಿಯಲ್ಲಿ ನಿಯಮ ಬಾಹಿರವಾಗಿ ಪ್ರಥಮ ದರ್ಜೆ ಸಹಾಯಕ ಹುದ್ದೆಯಿಂದ ಅಧೀಕ್ಷಕ ಹುದ್ದೆಗೆ ಮುಂಬಡ್ತಿ ನೀಡಿರುವುದು ಮತ್ತು ಸರ್ಕಾರದ ಆದೇಶವನ್ನು ಉಲ್ಲಂಘಿಸಿ ಗ್ರಾಮ ಪಂಚಾಯತ್ ಸಿಬ್ಬಂದಿಗಳ ನೇಮಕಾತಿಗೆ ಅನುಮೋದನೆ ನೀಡಿರುವುದು. ಈ ಆರೋಪಗಳ ಕುರಿತಂತೆ ಕರ್ನಾಟಕ ನಾಗರೀಕ ಸೇವೆಗಳು-(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು-1957ರ ನಿಯಮಗಳ ನಿಯಮ-12ರಡಿ ಶಿಸ್ತುಕ್ರಮ ಜರುಗಿಸಲು ಮೇಲೆ(1)ರಲ್ಲಿ ಓದಲಾದ ದಿನಾಂಕ:26.10.2013ರಂದು ಕಾರಣ ಕೇಳುವ ನೋಟೀಸ್‌ನ್ನು ಜಾರಿಮಾಡಿ ಲಿಖಿತ ಉತ್ತರವನ್ನು ನೀಡಲು ಸೂಚಿಸಲಾಗಿತ್ತು. ಅಂತೆಯೇ ಅಧಿಕಾರಿಯು ಅವರು ಮೇಲೆ (2)ರಲ್ಲಿ ಓದಲಾದ ದಿನಾಂಕ:07.02.2014ರಂದು ಅವರ ಲಿಖಿತ ರಕ್ಷಣಾ ಹೇಳಿಕೆಯನ್ನು ಸಲ್ಲಿಸುತ್ತಾ, ಅವರ ಮೇಲಿನ ಆರೋಪಗಳನ್ನು ನಿರಾಕರಿಸಿರುತ್ತಾರೆ. ಸರ್ಕಾರವು ಸದರಿ ಲಿಖಿತ ಹೇಳಿಕೆಯ ಮೇಲೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗ ರವರ ಅಭಿಪ್ರಾಯವನ್ನೂ ಪಡೆದು ವಿವರವಾಗಿ ಪರಿಶೀಲಿಸಿ ಈ ಪ್ರಕರಣವನ್ನು ಮುಕ್ತಾಯಗೊಳಿಸಲು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 162 ಪಬವ 2010 ಬೆಂಗಳೂರು ದಿನಾಂಕ:21-05-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ವೈ.ಡಿ.ಕುನ್ನಿಭಾವಿ, ಹಿಂದಿನ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಗದಗ (ಪ್ರಸ್ತುತ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಧಾರವಾಡ) ಅವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು-1957ರ ನಿಯಮ-12 ರಡಿ ಕಾರಣ ಕೇಳುವ ನೋಟೀಸ್ ಅನ್ನು ಸಂಖ್ಯೆ:ಗ್ರಾಅಪ 162 ಪಬವ 2010 ದಿನಾಂಕ:26.10.2013ನ್ನು ಜಾರಿ ಮಾಡುವ ಮೂಲಕ ಪ್ರಾರಂಭಿಸಲಾಗಿದ್ದ ಶಿಸ್ತುಕ್ರಮವನ್ನು ಈ ಮೂಲಕ ಮುಕ್ತಾಯ ಮಾಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ, ಗದಗ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ/ಗದಗ/ಧಾರವಾಡ
4) ಶ್ರೀ ವೈ.ಡಿ.ಕುನ್ನಿಭಾವಿ, ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಧಾರವಾಡ.

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 136 ಪಬವ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:23-05-2014.

## ಅಧಿಸೂಚನೆ

ಶ್ರೀ ಡಿ.ಎನ್.ನಾಗರಾಜ್, ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ.ಕೋಶ, ಜಿಲ್ಲಾ ಪಂಚಾಯತ್, ಬೀದರ್ ಇವರ ಸೇವೆಯನ್ನು ಅವರ ಕೋರಿಕೆಯ ಮೇರೆಗೆ ಅಧಿಕಾರಿಯ ಮಾತೃ ಇಲಾಖೆಯಾದ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಗೆ ಹಿಂದಿರುಗಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1) ಮಹಾಲೇಖಪಾಲರು, (ಎ ಮತ್ತು ಇ ) ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.
4) ಸರ್ಕಾರದ ಅಧೀನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.
5) ಸಂಬಂಧಿಸಿದ ಅಧಿಕಾರಿಗೆ.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶೀ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

SM